# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 356 |
| 2. ಸದಸ್ಯರ ಹೆಸರು | : | ಶ್ರೀ ಶಶಿಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) |
| 3. ಉತ್ತರಿಸಬೇಕಾದ ದಿನಾಂಕ | : | 15.02.2024. |
| 4. ಉತ್ತರಿಸುವ ಸಚಿವರು | : | ಮಾನ್ಯ ಮುಖ್ಯಮಂತ್ರಿಗಳು |

<table>
<tr><th>ಕ್ರ.ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ಪ್ರಸ್ತುತ ಆರ್ಥಿಕ ಇಲಾಖೆಗೆ ರಾಜ್ಯ ಸರ್ಕಾರದ ಯಾವ ಯಾವ ಇಲಾಖೆಗಳಿಂದ ಮತ್ತು ಸಚಿವಾಲಯಗಳಿಂದ ಖಾಲಿಯಿರುವ ಎಷ್ಟು ಹುದ್ದೆಗಳ ನೇಮಕಾತಿಗಾಗಿ ಪ್ರಸ್ತಾವನೆಗಳು ಬಂದಿದೆ; (ವಿವರ ನೀಡುವುದು)</td><td rowspan="2">1. ಸರ್ಕಾರದ ವಿವಿಧ ಇಲಾಖೆಗಳಿಗೆ ಮಂಜೂರಾದ ಹುದ್ದೆಗಳನ್ನು ನೇರ ನೇಮಕಾತಿ ಮತ್ತು ಮುಂಬಡ್ತಿ ಹುದ್ದೆಗಳೆಂದು ಗುರುತಿಸಲಾಗಿದೆ. ಇವುಗಳ ಪೈಕಿ ಮುಂಬಡ್ತಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಆಡಳಿತ ಇಲಾಖೆಗಳಿಗೆ ಅಧಿಕಾರವಿರುತ್ತದೆ. ಸದರಿ ಮುಂಬಡ್ತಿ ಹುದ್ದೆಗಳ ಭರ್ತಿಗೆ ಆರ್ಥಿಕ ಇಲಾಖೆಯು ಅನುಮತಿ ಅಗತ್ಯವಿರುವುದಿಲ್ಲ. ನೇರ ನೇಮಕಾತಿಗೆ ಸಂಬಂಧಿಸಿದಂತೆ, ಆರ್ಥಿಕ ಮಿತವ್ಯಯ ಜಾರಿಯಲ್ಲಿದ್ದರೂ ಸಹ ಇಲಾಖೆಗಳಿಂದ ಬರುವ ಪ್ರಸ್ತಾವನೆಗಳನ್ನು ಪ್ರಕರಣವಾರು ಪರಿಶೀಲಿಸಿ, ಸಾರ್ವಜನಿಕ ಕೆಲಸ ಕಾರ್ಯಗಳಿಗೆ ತೊಂದರೆಯಾಗದಂತೆ ಮತ್ತು ಇಲಾಖೆಗೆ ನಿಗದಿಪಡಿಸಿರುವ ಕರ್ತವ್ಯ ಮತ್ತು ಜವಾಬ್ದಾರಿಗಳನ್ನುನಿರ್ವಹಿಸಲು ಅಗತ್ಯತೆಗೆ ಅನುಗುಣವಾಗಿ ಅವಶ್ಯವಿರುವ ಸಿಬ್ಬಂದಿಯನ್ನು ಭರ್ತಿ ಮಾಡಲು ಪರಿಶೀಲಿಸಿ, ಆರ್ಥಿಕ ಇಲಾಖೆಯು ಅನುಮತಿ ನೀಡಲಾಗುತ್ತಿದೆ.<br><br>2. ಕಲ್ಯಾಣ ಕರ್ನಾಟಕ ಹುದ್ದೆಗಳಿಗೆ ಸಂಬಂಧಿಸಿದಂತೆ, ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ: ಆಇ 02 ಬಿಇಎಂ 2021 ರನ್ವಯ ಶೇ. 80 ರಷ್ಟು ಹುದ್ದೆಗಳನ್ನು ನೇರ ನೇಮಕಾತಿಯಡಿ ಭರ್ತಿ ಮಾಡಿಕೊಳ್ಳಲು ಆಡಳಿತ ಇಲಾಖೆಯ ಹಂತದಲ್ಲಿಯೇ ಮುಂದುವರೆಸಲು ಹಾಗೂ ಶೀಘ್ರಲಿಪಿಗಾರರು, ಬೆರಳಚ್ಚುಗಾರ, ವಾಹನ ಚಾಲಕರು ಮತ್ತು ಗ್ರೂಪ್-ಡಿ ವೃಂದಗಳ ಹುದ್ದೆಗಳನ್ನು ಅನುದಾನದ ಲಭ್ಯತೆಗೊಳಪಟ್ಟು ಹೊರಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಿಕೊಳ್ಳಲು ಸಹಮತಿ ನೀಡಿದೆ.<br><br>3. ಅನುಕಂಪದ ಆಧಾರದ ನೇಮಕಾತಿ ಪ್ರಕರಣಗಳಿಗೆ ಸಂಬಂಧಿಸಿದಂತೆ ನೇಮಕಾತಿ ಆದೇಶ ನೀಡಲು ಸುತ್ತೋಲೆ ಸಂಖ್ಯೆ: ಆಇ 05 ಬಿಇಎಂ 2020, 12.01.2021 ರನ್ವಯ ಸಹಮತಿ ನೀಡಿದೆ.</td></tr>
<tr><td>ಆ</td><td>ವಿವಿಧ ಇಲಾಖೆಗಳು ಮತ್ತು ಸಚಿವಾಲಯಗಳಿಂದ ಬಂದಿರುವ ಪ್ರಸ್ತಾವನೆಗಳಲ್ಲಿ ಆರ್ಥಿಕ ಇಲಾಖೆಯು ಯಾವ ಯಾವ ಹುದ್ದೆಗಳ ಮತ್ತು ಎಷ್ಟು ಹುದ್ದೆಗಳಿಗೆ ಅನುಮೋದನೆಯನ್ನು ನೀಡಲಾಗಿದೆ (ವಿವರ ನೀಡುವುದು)</td></tr>
</table>

| | | |
|---|---|---|
| | | 4. ಬ್ಯಾಕ್‌ಲಾಗ್ ಹುದ್ದೆಗಳಿಗೆ ಸಂಬಂಧಿಸಿದಂತೆ ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ: ಆಇ 02 ಬಿಇಎಂ 2021, ದಿನಾಂಕ: 04.07.2022ರ ಸೂಚನೆಯನ್ವಯ ಕ್ರಮಕೈಗೊಳ್ಳಲು ತಿಳಿಸಿದ.<br>5.2021-22ನೇ ಸಾಲಿನಿಂದ 2023-24 ರವರೆಗೆ(ಜನವರಿ 2024ರ ಅಂತ್ಯದ ವರೆಗೆ) ವಿವಿಧ ಇಲಾಖೆಗಳಿಂದ ಹುದ್ದೆಗಳ ನೇಮಕಾತಿಗಾಗಿ ಸಲ್ಲಿಕೆಯಾಗಿದ್ದ ಪ್ರಸ್ತಾವನೆಗಳನ್ನು ಪರಿಶೀಲಿಸಿ, ಗೆಜೆಟೆಡ್ ಪ್ರೊಬೇಷನರ್ಸ್ ಹುದ್ದೆಗಳನ್ನೂ ಸೇರಿದಂತೆ ವಿವಿಧ ವೃಂದದ ಒಟ್ಟು 59289 ಹುದ್ದೆಗಳನ್ನು ನೇರ ನೇಮಕಾತಿ ಮುಖಾಂತರ ಭರ್ತಿ ಮಾಡಿಕೊಳ್ಳಲು ಆರ್ಥಿಕ ಇಲಾಖೆಯು ಸಹಮತಿ ನೀಡಿದೆ. |

ಸಂಖ್ಯೆ: ಆಇ 4 ಬಿಜಿಎಲ್ 2024

(ಸಿದ್ದರಾಮಯ್ಯ)

ಮುಖ್ಯಮಂತ್ರಿ